## ಕರ್ನಾಟಕ ಸರ್ಕಾರ

ಸಂಖ್ಯೆ: AGRI-AML/141/2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:31-12-2021.

## ಸೇರ್ಪಡೆ ಆದೇಶ

2021-22 ನೇ ಸಾಲಿನ ಆರ್ಥಿಕ ವರ್ಷದಿಂದ ಮುಖ್ಯಮಂತ್ರಿ ರೈತವಿದ್ಯಾನಿಧಿ ಯೋಜನೆಯನ್ನು ಜಾರಿಗೊಳಿಸಲು ಸರ್ಕಾರದ ಆದೇಶ ಸಂಖ್ಯೆ:AGRI-AML/141/2021, ದಿನಾಂಕ:07-08-2021 ರಲ್ಲಿ ಈ ಕೆಳಕಂಡ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು ಕೋರ್ಸ್‌ಗಳ ಮುಂದೆ ನಮೂದಿಸಿರುವಂತೆ ವಿದ್ಯಾರ್ಥಿವೇತನ ಸೌಲಭ್ಯವನ್ನು ನೀಡಲು ಆದೇಶ ಹೊರಡಿಸಲಾಗಿತ್ತು.

| ಕ್ರ. ಸಂ | ಕೋರ್ಸ್‌ನ ಹೆಸರು/ಕೋರ್ಸ್‌ನ ವಿಧಗಳು | ಹುಡುಗರು/ ಪುರುಷರು | ಹುಡುಗಿಯರು/ ಅನ್ಯ ಲಿಂಗದವರು |
|---|---|---|---|
| 1 | ಪದವಿಯ ಮುಂಚಿ ಪಿ.ಯು.ಸಿ/ಐ.ಟಿ.ಐ/ಡಿಪ್ಲೋಮಾ | ರೂ.2500/- | ರೂ.3000/- |
| 2 | ಎಲ್ಲಾ ಬಿ.ಎ/ಬಿ.ಎಸ್.ಸಿ/ಬಿ.ಕಾಂ ಇತ್ಯಾದಿ ಎಂ.ಬಿ.ಬಿ.ಎಸ್/ಬಿ.ಇ/ಬಿ.ಟೆಕ್ ಮತ್ತು ವೃತ್ತಿಪರ ಕೋರ್ಸ್ ಗಳನ್ನು ಹೊರತುಪಡಿಸಿ | ರೂ.5000/- | ರೂ.5500/- |
| 3 | ಎಲ್.ಎಲ್.ಬಿ/ಪ್ಯಾರಾ ಮೆಡಿಕಲ್/ಬಿ.ಫಾರ್ಮ್/ನರ್ಸಿಂಗ್ ಇತ್ಯಾದಿ ವೃತ್ತಿಪರ ಕೋರ್ಸ್ ಗಳು | ರೂ.7500/- | ರೂ.8000/- |
| 4 | ಎಂ.ಬಿ.ಬಿ.ಎಸ್./ಬಿ.ಇ/ಬಿ.ಟೆಕ್ ಮತ್ತು ಎಲ್ಲಾ ಸ್ನಾತಕೋತ್ತರ ಕೋರ್ಸ್ ಗಳು | ರೂ.10,000/- | ರೂ.11,000/- |



Scanned by CamScanner

ಮುಖ್ಯಮಂತ್ರಿ ರೈತ ವಿದ್ಯಾನಿಧಿ ಯೋಜನೆಯನ್ನು ಜಾರಿಗೊಳಿಸಲು ದಿನಾಂಕ:07-08-2021 ರಲ್ಲಿ ಹೊರಡಿಸಿದ ಆದೇಶದಲ್ಲಿನ ಷರತ್ತುಗಳಿಗೆ ಸರ್ಕಾರದ ಆದೇಶ ಸಂಖ್ಯೆ:AGRI-AML/141/2021, ದಿನಾಂಕ:10-12-2021 ರಲ್ಲಿ ಕೆಲವೊಂದು ಷರತ್ತುಗಳನ್ನು ಮಾರ್ಪಡಿಸಿ ಆದೇಶ ಹೊರಡಿಸಲಾಗಿದೆ.

ವಿದ್ಯಾಭ್ಯಾಸಕ್ಕೆ ಉತ್ತೇಜನ ನೀಡಲು ಹಾಗೂ ಶಾಲೆ ತೊರೆಯುವುದನ್ನು ತಡೆಯಲು ಪ್ರೌಢಶಿಕ್ಷಣ (8 ರಿಂದ 10 ನೇ ತರಗತಿಯವರೆಗೆ) ಪಡೆಯುತ್ತಿರುವ ರೈತ ಕುಟುಂಬದ ಹೆಣ್ಣು ಮಕ್ಕಳಿಗೆ ಮುಖ್ಯಮಂತ್ರಿ ರೈತ ವಿದ್ಯಾನಿಧಿ ಕಾರ್ಯಕ್ರಮವನ್ನು ವಿಸ್ತರಿಸಿ ವಾರ್ಷಿಕ ಎರಡು ಸಾವಿರದಂತೆ ವಿದ್ಯಾರ್ಥಿವೇತನವನ್ನು ನೀಡಲು ಮಾನ್ಯ ಮುಖ್ಯಮಂತ್ರಿಯವರು ನಿರ್ದೇಶನ ನೀಡಿರುತ್ತಾರೆ.

ಮುಖ್ಯಮಂತ್ರಿ ರೈತ ವಿದ್ಯಾನಿಧಿ ಯೋಜನೆಯಡಿಯಲ್ಲಿ ಪ್ರೌಢಶಿಕ್ಷಣ (8 ರಿಂದ 10 ನೇ ತರಗತಿಯವರೆಗೆ) ವ್ಯಾಸಂಗ ಮಾಡುತ್ತಿರುವ ರೈತ ಕುಟುಂಬದ ಹೆಣ್ಣು ಮಕ್ಕಳಿಗೆ 2021-22ನೇ ಆರ್ಥಿಕ ವರ್ಷದಿಂದ ವಾರ್ಷಿಕವಾಗಿ ತಲಾ ರೂ.2000/-ಗಳ ವಿದ್ಯಾರ್ಥಿವೇತನ ಸೌಲಭ್ಯ ವಿಸ್ತರಣೆ ಮಾಡಿ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ:AGRI-AML/141/2021, ದಿನಾಂಕ:07-08-2021 ಹಾಗೂ ಮಾರ್ಪಾಡು ಆದೇಶ ಸಂಖ್ಯೆ: AGRI-AML/141/2021 ದಿನಾಂಕ: 10.12.2021 ರಲ್ಲಿ ವಿಧಿಸಲಾದ ಷರತ್ತುಗಳು ಪ್ರೌಢಶಿಕ್ಷಣ (8 ರಿಂದ 10 ನೇ ತರಗತಿಯವರೆಗೆ) ವನ್ನು ವ್ಯಾಸಂಗ ಮಾಡುತ್ತಿರುವ ರೈತ ಕುಟುಂಬದ ಹೆಣ್ಣು ಮಕ್ಕಳಿಗೂ ಸಹ ಅನ್ವಯಿಸುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

31/12/2021
(ಪಿ. ಸತ್ಯಭಾಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

31/12/21

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-ಇದನ್ನು ಇ-ವಿಶೇಷ ಗೆಜೆಟ್ ನಲ್ಲಿ ಹೊರಡಿಸಲು ಕೋರಿದೆ.



Scanned by CamScanner

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
5. ಸನ್ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಸರ್ಕಾರದ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
7. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
8. ಕುಲಪತಿಗಳು, ರಾಜ್ಯದ ಎಲ್ಲಾ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳು/ ಕೃಷಿ ಪೂರಕ ವಿಜ್ಞಾನಗಳ ವಿಶ್ವವಿದ್ಯಾಲಯಗಳು.
9. ಕೃಷಿ ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ ,ಬೆಂಗಳೂರು.
10. ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
11. ಎಲ್ಲಾ ಜಿಲ್ಲಾಧಿಕಾರಿಗಳು,
12. ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು.
13. ಯೋಜನಾ ನಿರ್ದೇಶಕರು, ನೇರ ನಗದು ವರ್ಗಾವಣೆ ಕೋಶ (Direct Benefit Tranfer - DBT Cell), ಸಿಆಸುಇ (ಇ-ಆಡಳಿತ), ಬಹುಮಹಡಿಗಳಕಟ್ಟಡ, ಬೆಂಗಳೂರು.
14. ಶಾಖಾ ರಕ್ಷಾ ಕಡತ/ ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿಇಲಾಖೆ.
3. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಬಹುಮಹಡಿಗಳ ಕಟ್ಟಡ.
4. ಸರ್ಕಾರದ ಉಪ ಕಾರ್ಯದರ್ಶಿರವರ ಆಪ್ತ ಶಾಖೆ, ಕೃಷಿ ಇಲಾಖೆ.



Scanned by CamScanner